**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ**
**ರಾಷ್ಟ್ರೀಯ ಸೇವಾ ಯೋಜನೆ**

**ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/02/ಐಡಿಪಿ/2016-17**

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01,
ದಿನಾಂಕ: 22-03-2017

***ಸುತ್ತೋಲೆ***

ವಿಷಯ: ಶಾಲಾ ಕಾಲೇಜುಗಳ ಆವರಣದ ಸುತ್ತ ಮುತ್ತ ಮಾದಕ ದ್ರವ್ಯಗಳನ್ನು ನಿಷೇಧಿಸಲು ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: 1) ಉನ್ನತ ಶಿಕ್ಷಣಸಚಿವರು ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ: ಆಕುಕಸ/1381/2016-17 ದಿನಾಂಕ: 09-01-2017

2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಉನ್ನತ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ:ಉಶಿಮ/124/2017,ದಿ: 08-02-2017.

*********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯದಲ್ಲಿ ತಂಬಾಕು ಉತ್ಪನ್ನವನ್ನು ನಿಷೇಧ ಗೊಳಿಸುವ ಬಗ್ಗೆ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸುತ್ತೋಲೆ ಹಾಗೂ ಅಧಿಸೂಚನೆಯನ್ನು ಹೊರಡಿಸಲಾಗಿದೆ, ಸೂಚನೆಯನ್ವಯ ಶಾಲಾ ಕಾಲೇಜುಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಆವರಣದಿಂದ 100 ಮೀಟರ್ ವ್ಯಾಪ್ತಿಯೊಳಗೆ ಗುಟ್ಕಾ, ತಂಬಾಕು , ತಂಬಾಕುಯುಕ್ತ ಡ್ರಗ್ಸ್ ಹಾಗೂ ಸಿಗರೇಟ್ ಮುಂತಾದ ಮಾದಕ ದ್ರವ್ಯಗಳನ್ನು ಮಾರಾಟವನ್ನು ನಿಷೇಧಿಸಲು ಸಂಸ್ಥೆಗಳ ಮುಖ್ಯಸ್ಥರುಗಳು ಕಟ್ಟುನಿಟ್ಟಾಗಿ ಕಾನೂನು ನಿಯಮ ಪಾಲಿಸುವುದು ಹಾಗೂ ಕಾನೂನು ಬಾಹಿರವಾಗಿ ಮಾರಾಟ ಮಾಡುವುದು ಕಂಡುಬಂದರೆ, ಅದನ್ನು ಆಯಾ ಜಿಲ್ಲಾಧಿಕಾರಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೇಲಿನ ಉಲ್ಲೇಖಿತ ಪತ್ರಗಳನ್ನು ಲಗತ್ತಿಸಲಾಗಿದೆ.

ನಿರ್ದೇಶಕರು

ಪ್ರತಿ: 1. ರಾಜ್ಯದ ಎಲ್ಲಾ ಇಂಜಿನೀಯರಿಂಗ್ ಕಾಲೇಜ್ ಹಾಗೂ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ.-ಸೂಕ್ತ ಕ್ರಮಕ್ಕಾಗಿ.
2. ಮಾನ್ಯ ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ ಬೆಂಗಳೂರು-1
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು. ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಬೆಂಗಳೂರು-1
4. ಇ-ಆಡಳಿತ ಅಂತರ್‌ಜಾಲತಾಣದಲ್ಲಿ ಪ್ರಕಟಿಸಲು
5. ಕಛೇರಿ ಕಡತಕ್ಕೆ.

ಬಸವರಾಜ ರಾಯರಡ್ಡಿ
ಉನ್ನತ ಶಿಕ್ಷಣ ಮಂತ್ರಿ

ಕೊಠಡಿ ಸಂಖ್ಯೆ: 317/317ಎ,
3ನೇ ಮಹಡಿ, ವಿಧಾನಸೌಧ,
ಬೆಂಗಳೂರು-560001.
ದೂರವಾಣಿ ಸಂಖ್ಯೆ: 080-22253835
080-22033234
Mail ID: heminister9@gmail.com

ಸಂ.ಉಶಿಮ/ 124 /2017

ದಿನಾಂಕ:08-02-2017

3276/2h/2017
16.02.2017

## ಟಿಪ್ಪಣಿ

ಶ್ರೀ ಕೆ.ಆರ್. ರಮೇಶ್ ಕುಮಾರ್, ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು, ಇವರ ನಡವಳಿಯನ್ನು ಲಗತ್ತಿಸಿದೆ.

(COTPA) ರ ಅಡಿಯಲ್ಲಿ ರಾಜ್ಯದ ಶಾಲಾ ಕಾಲೇಜುಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಆವರಣದಿಂದ 100 ಮೀಟರು ವ್ಯಾಪ್ತಿಯೊಳಗೆ ಗುಟ್ಕಾ, ತಂಬಾಕು, ತಂಬಾಕುಯುಕ್ತ ಡ್ರಗ್ಸ್ ಹಾಗೂ ಸಿಗರೇಟ್ ಮುಂತಾದ ತಂಬಾಯಕುಯುಕ್ತ ಉತ್ಪನ್ನಗಳ ಮಾರಾಟ ಮಾಡುವುದನ್ನು ನಿಯಂತ್ರಿಸಲು ಸರ್ಕಾರ ಆದೇಶಿಸಿರುವುದರಿಂದ, ರಾಜ್ಯದ ಎಲ್ಲಾ ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರುಗಳು ಕಟ್ಟುನಿಟ್ಟಾಗಿ ಇದನ್ನು ಪಾಲಿಸುವಲ್ಲಿ ಕ್ರಮ ಕೈಗೊಳ್ಳಬೇಕೆಂದು ಹಾಗೂ ಮೇಲ್ಕಂಡ ತಂಬಾಕುಯುಕ್ತ ಉತ್ಪನ್ನಗಳನ್ನು ಕಾನೂನು ಬಾಹಿರವಾಗಿ ಮಾರಾಟ ಮಾಡುವುದು ಕಂಡುಬಂದರೆ, ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಗಮನಕ್ಕೆ ತರುವಂತೆ ಕೋರಿರುತ್ತಾರೆ.

ಸದರಿ ಮನವಿಯನ್ನು ಪರಿಶೀಲಿಸಿ, ರಾಜ್ಯದ ಎಲ್ಲಾ ಕಾಲೇಜುಗಳ ಮುಖ್ಯಸ್ಥರಿಗೆ ಈ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸುವಂತೆ ಸೂಚಿಸಿದೆ.

(ಬಸವರಾಜ ರಾಯರಡ್ಡಿ)

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು
ಉನ್ನತ ಶಿಕ್ಷಣ ಇಲಾಖೆ
ಕರ್ನಾಟಕ ಸರ್ಕಾರ
ಬೆಂಗಳೂರು.

ಉಶಿ(ಉಶಿ)

C.no - 3033/17
13/2/17

US CE/T

ಕೆ.ಆರ್. ರಮೇಶ್ ಕುಮಾರ್
ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಸಚಿವರು ಹಾಗೂ
ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರು

HEM/124/2017
10/1/2017

ಕೊಠಡಿ ಸಂಖ್ಯೆ: 343
ವಿಧಾನಸೌಧ, ಬೆಂಗಳೂರು – 560 001
ದೂ.ಸಂ. 080–22259183
22033475
email: healthminister2016@gmail.com

ಸಂಖ್ಯೆ: ಆಕುಕಸ/1381/2016–17

ದಿನಾಂಕ: 09-01-2017

# ನಡವಳಿ

ಕರ್ನಾಟಕ ರಾಜ್ಯದಲ್ಲಿ ತಂಬಾಕು ಉತ್ಪನ್ನವನ್ನು ನಿಷೇಧಗೊಳಿಸುವ ಬಗ್ಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಸುತ್ತೋಲೆಯನ್ನು ಹಾಗೂ ಅಧಿಸೂಚನೆಯನ್ನು ಹೊರಡಿಸಲಾಗಿದೆ. The Cigarettes and other Tobacco Products (Prohibition of Advertisement and Regulation of Trade and Commerce, Production, Supply and Distribution) Act, 2003 (COTPA) ರ ಅಡಿಯಲ್ಲಿ ಶಾಲಾ ಕಾಲೇಜುಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಆವರಣದಿಂದ 100 ಮೀಟರು ವ್ಯಾಪ್ತಿಯೊಳಗೆ ಗುಟ್ಕಾ, ತಂಬಾಕು, ತಂಬಾಕುಯುಕ್ತ ಡ್ರಗ್ಸ್ ಹಾಗೂ ಸಿಗರೇಟ್ ಮುಂತಾದ ತಂಬಾಕುಯುಕ್ತ ಉತ್ಪನ್ನಗಳನ್ನು ಮಾರಾಟ ಮಾಡುವುದನ್ನು ನಿಯಂತ್ರಿಸಲು ಸರ್ಕಾರದ ಆದೇಶವಿರುವುದರಿಂದ, ಅದರಂತೆ, ಪ್ರಚಾರವನ್ನು ಕೈಗೊಂಡು, ಮುಂದಿನ ಒಂದು ತಿಂಗಳೊಳಗಾಗಿ ಗುಟ್ಕಾ, ತಂಬಾಕು, ತಂಬಾಕುಯುಕ್ತ ಡ್ರಗ್ಸ್, ಸಿಗರೇಟ್ ಹಾಗೂ ತಂಬಾಕುಯುಕ್ತ ಮಾದಕ ಪದಾರ್ಥಗಳ ಮುಕ್ತ ಪ್ರದೇಶವನ್ನಾಗಿ ಮಾಡುವಲ್ಲಿ ತಮ್ಮ ಸಹಕಾರವನ್ನು ಕೋರುತ್ತೇನೆ. ಈಗಾಗಲೇ ಈ ಬಗ್ಗೆ ಜಿಲ್ಲಾಧಿಕಾರಿಗಳಿಗೂ ಸುತ್ತೋಲೆ ಹಾಗೂ ಅಧಿಸೂಚನೆಯನ್ನು ಹೊರಡಿಸಲಾಗಿದೆ (ಪ್ರತಿಯನ್ನು ಲಗತ್ತಿಸಿದೆ).

ಮೇಲ್ಕಂಡ ಅಂಶಗಳ ಬಗ್ಗೆ ತಮ್ಮ ಇಲಾಖೆಯ ಅಧೀನದಲ್ಲಿ ಬರುವ ಎಲ್ಲಾ ಕಾಲೇಜು ಹಾಗೂ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರುಗಳು ಕಟ್ಟುನಿಟ್ಟಾಗಿ ಕಾನೂನು ನಿಯಮ ಪಾಲಿಸುವಂತೆಯೂ ಹಾಗೂ ಇದನ್ನು ಪಾಲಿಸುತ್ತಿರುವ ಬಗ್ಗೆ ಸೂಕ್ತ ದೃಢೀಕರಣವನ್ನು ನೀಡಬೇಕಾಗಿರುತ್ತದೆ ಹಾಗೂ ಈ ಬಗ್ಗೆ ಕಾಲೇಜು ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಕ್ರಮ ವಹಿಸುವಂತೆ ಆದೇಶಿಸಬೇಕಾಗಿ ವಿನಂತಿಸಲಾಗಿದೆ. ಒಂದು ವೇಳೆ, ಮೇಲ್ಕಂಡ ತಂಬಾಕುಯುಕ್ತ ಉತ್ಪನ್ನಗಳನ್ನು ಕಾನೂನು ಬಾಹಿರವಾಗಿ ಮಾರಾಟ ಮಾಡುವುದು ಕಂಡುಬಂದರೆ, ಅದನ್ನು ಆಯಾ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಲ್ಲಿ, ಪೊಲೀಸ್ ಸಹಕಾರದ ಮೂಲಕ ಕಾನೂನಿನಂತೆ ಕಠಿಣ ಕ್ರಮ ಕೈಗೊಳ್ಳಲು ಸಂಸ್ಥೆಯ ಮುಖ್ಯಸ್ಥರು ಜವಾಬ್ದಾರಿ ವಹಿಸಲು ಕೋರಿದೆ.

(ಕೆ. ಆರ್. ರಮೇಶ್ ಕುಮಾರ್)

**ವಂದನೆಗಳೊಂದಿಗೆ,**
ಮಾನ್ಯ ಉನ್ನತ ಶಿಕ್ಷಣ ಸಚಿವರು,
ಕರ್ನಾಟಕ ಸರ್ಕಾರ.